## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿರಿಯೂರು ತಾಲ್ಲೂಕು, ಯರಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಮಂಡನಾಧಿಕಾರಿಗಳ ಬದಲಾವಣೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/229/ವಿಸೇಬಿ/2014, ದಿ:12-02-2016.
2. ಶ್ರೀ ಎಸ್.ಎಂ.ನಾಗಭೂಷಣ, ಸಹಾಯಕ ಕಾರ್ಯದರ್ಶಿ, ಜಿ.ಪಂ. ಚಿತ್ರದುರ್ಗ ಇವರ ಪತ್ರ ದಿ:04-10-2016

-ooo-

ಪ್ರಸ್ತಾವನೆ:

ಹಿರಿಯೂರು ತಾಲ್ಲೂಕು, ಯರಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು, ಸರ್ಕಾರವು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಸಹಾಯಕ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಶ್ರೀ ಎಸ್.ಎಂ.ನಾಗಭೂಷಣ, ಸಹಾಯಕ ಕಾರ್ಯದರ್ಶಿ,ಜಿ.ಪಂ. ಚಿತ್ರದುರ್ಗ ಇವರ ಪತ್ರದಲ್ಲಿ ಅನಾರೋಗ್ಯದ ನಿಮಿತ್ತ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಆದ ತಮ್ಮನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿರುವುದನ್ನು ಮಾರ್ಪಡಿಸಲು ಕೋರಿರುತ್ತಾರೆ. ಆದುದರಿಂದ ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 229 ವಿಸೇಬಿ 2014,ಬೆಂಗಳೂರು, ದಿನಾಂಕ:01-03-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಹಿರಿಯೂರು ತಾಲ್ಲೂಕು, ಯರಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣದಲ್ಲಿ, ವಿಚಾರಣಾಧಿಕಾರಿಗಳ ಮುಂದೆ ಪ್ರಕರಣವನ್ನು ಮಂಡಿಸಲು ಹಿಂದೆ ನೇಮಿಸಿದ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರ ಬದಲಾಗಿ ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ಇವರನ್ನು ಮಂಡನಾಧಿಕಾರಿಯಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

01/03/2017

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

..2

ಗೆ:

1. ಮಹಾಲೇಖಪಾಲರು,(ಎ & ಇ)) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ
3. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ.1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರ ಲೇಔಟ್, ಬೆಂಗಳೂರು -560040.
4. ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ (ಮಂಡನಾಧಿಕಾರಿ)
5. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ - ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ.ಅ.&ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.